ಕನ್ನಡಪ್ರಭ

# ನ್ಯಾ.ಸಂತೋಷ್ ಹೆಗ್ಡೆ ತಂಡದಿಂದ ಬೆಳ್ಳಂದೂರು ಕೆರೆ ಪರಿಶೀಲನೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಬೆಳ್ಳಂದೂರು ಕೆರೆ ನಿರ್ವಹಣೆಗಾಗಿ ರಾಷ್ಟ್ರೀಯ ಹಸಿರು ನ್ಯಾಯಪೀಠ ಹೊರಡಿಸಿರುವ ಆದೇಶ ಪಾಲನೆಗಾಗಿ ರಚಿಸಿರುವ ಲೋಕಾಯುಕ್ತ ನಿವೃತ್ತ ನ್ಯಾ.ಎನ್.ಸಂತೋಷ್ ಹೆಗ್ಡೆ ನೇತೃತ್ವದ ತಂಡವು ಶುಕ್ರವಾರ ಬೆಳ್ಳಂದೂರು ಕೆರೆಗೆ ಭೇಟಿ ನೀಡಿ, ಪರಿಶೀಲನೆ ನಡೆಸಿತು.

**ಮಲಿನ ನೀರಿನಿಂದ ರೈತರಿಗೆ ಆಗುತ್ತಿರುವ ತೊಂದರೆ ಬಗ್ಗೆಯೂ ಮಾಹಿತಿ ಸಂಗ್ರಹ**

ಕೆರೆ ನೀರು ಮಲಿನಗೊಂಡಿರುವುದರಿಂದ ಸುತ್ತಮುತ್ತಲ ನಿವಾಸಿಗಳಿಗೆ ಯಾವ ರೀತಿ, ಯಾವ ಸಮಯದಲ್ಲಿ ಹೆಚ್ಚಿನ ತೊಂದರೆಯಾಗುತ್ತದೆ ಎಂದು ಮಾಹಿತಿ ಕಲೆ ಹಾಕಲಾಯಿತು. ಅಲ್ಲದೆ, ಸ್ಥಳೀಯರು ಪ್ರತಿ ದಿನ ಅನುಭವಿಸುತ್ತಿರುವ ಸಮಸ್ಯೆಗಳ ಕುರಿತಂತೆ ಲಿಖಿತವಾಗಿ ಮನವಿ ನೀಡುವಂ ತೆಯೂ ಸೂಚಿಸಲಾಯಿತು. ಬಳಿಕ ಬೆಳ್ಳಂದೂರು, ಯಮ ಲೂರು ಕೋಡಿ, ಕೋರಮಂಗಲ-ಚಲ್ಲಘಟ್ಟ ವ್ಯಾಲಿ, ಚಲ್ಲಘಟ್ಟ ತ್ಯಾಜ್ಯ ನೀರು ಸಂಸ್ಕರಣಾ ಘಟಕಗಳನ್ನು ವೀಕ್ಷಿಸಲಾಯಿತು.

**ನೀರಿಗಾಗಿ ಕೋಲಾರ ರೈತರ ಮನವಿ:** ಸಂಪೂರ್ಣವಾಗಿ ನೀರನ್ನು ಸಂಸ್ಕರಿಸಿ ಕೋಲಾರ ಜಿಲ್ಲೆ ಕೆರೆಗಳಿಗೆ ಹರಿಸುವಂತೆ ಕೋಲಾರದಿಂದ ಬಂದಿದ್ದ ನೂರಾರು ರೈತರು ನ್ಯಾ.ಸಂತೋಷ್ ಹೆಗ್ಡೆ ಅವರಿಗೆ ಮನವಿ ಮಾಡಿದರು.

ಭೇಟಿ ವೇಳೆ ಐಐಎಸ್ಸಿ ವಿಜ್ಞಾನಿ ಡಾ.ಟಿ.ವಿ.ರಾಮಚಂದ್ರ, ಬಿಡಿಎ ಆಯುಕ್ತ ರಾಕೇಶ್ ಸಿಂಗ್, ಮಾಲಿನ್ಯ ನಿಯಂತ್ರಣ ಮಂಡಳಿ ಸದಸ್ಯರಾದ ಮನೋಜ್‌ಕುಮಾರ್, ರಮೇಶ್ ಕುಮಾರ್ ಸೇರಿದಂತೆ ಹಲವು ಅಧಿಕಾರಿಗಳು ಪಾಲ್ಗೊಂಡಿದ್ದರು.